ESTD - 1964

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

ಊಟಿ ರಸ್ತೆ, ಮೈಸೂರು

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ:08.07.2015

## ಪ್ರಕಟಣೆಯ ಕೃಪೆಗಾಗಿ

## ಜೆಎಸ್‌ಎಸ್ ಕಾಲೇಜಿನಲ್ಲಿ ಸುವರ್ಣ ಮಹೋತ್ಸವ ವಿಶೇಷ ಉಪನ್ಯಾಸ

ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ. ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಸ್ಥಾಪನೆಗೊಂಡು 50 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ 08.04.2015 ರಂದು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರ ದಿವ್ಯಸಾನ್ನಿಧ್ಯದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಸಿದ್ಧರಾಮಯ್ಯನವರು ಕಾಲೇಜಿನ ಸುವರ್ಣಮಹೋತ್ಸವವನ್ನು ಉದ್ಘಾಟನೆ ಮಾಡಿರುತ್ತಾರೆ. ಅದರ ಅಂಗವಾಗಿ ವರ್ಷವಿಡೀ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅದರಲ್ಲಿ ನಾಡಿನ ಗಣ್ಯರು. ಚಿಂತಕರು ಮತ್ತು ವಿದ್ವಾಂಸರಿಂದ ನಡೆಸುವ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವೂ ಒಂದಾಗಿದೆ.

ಈ ವಿಶೇಷ ಉಪನ್ಯಾಸ ಮಾಲೆಯ ಮೊಟ್ಟ ಮೊದಲ ಉಪನ್ಯಾಸವನ್ನು ನಾಡಿನ ಖ್ಯಾತ ವೈಜ್ಞಾನಿಕ ಚಿಂತಕರು. ರಾಷ್ಟ್ರಪ್ರಶಸ್ತಿ ಪುರಸ್ಕೃತರು ಹಾಗೂ ಪವಾಡ ಸಂಶೋಧನಾ ತಜ್ಞರೂ ಆದ ಶ್ರೀ ಹುಲಿಕಲ್ ನಟರಾಜು ಅವರು **"ಯುವಜನಾಂಗ ಮತ್ತು ವೈಚಾರಿಕತೆ"** ಎಂಬ ವಿಷಯವನ್ನು ಕುರಿತು ಉಪನ್ಯಾಸ ನೀಡಲಿದ್ದಾರೆ.

ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯನವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಮಾರಂಭದಲ್ಲಿ ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪನವರು ಹಾಗೂ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್ ಸೋಮಶೇಖರ್ ಅವರು ಉಪಸ್ಥಿತರಿರುತ್ತಾರೆ.

ಪ್ರಾಂಶುಪಾಲರು
ಜೆ.ಎಸ್.ಎಸ್.ಕಾಲೇಜು
ಊಟಿ ರಸ್ತೆ, ಮೈಸೂರು-25

ಸಂಪಾದಕರು

ಮೈಸೂರು